# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಬೆಂಗಳೂರು ಉತ್ತರ ತಾಲ್ಲೂಕು ಪಂಚಾಯತಿ ವ್ಯಾಪ್ತಿಯ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲೆಯ ಶಿಕ್ಷಕರ ವೇತನ ಪಾವತಿ ಸಂಬಂಧ ಅನುದಾನ ಬಿಡುಗಡೆಗೊಳಿಸುವ ಬಗ್ಗೆ

ಓದಲಾಗಿದೆ:

1. ಸುತ್ತೋಲೆ ಸಂಖ್ಯೆ: ಆಇ 01 ಜಿಪಅ 2014 ದಿನಾಂಕ:1.2.2014
2. ಬೆಂಗಳೂರು ಉತ್ತರ ತಾಲ್ಲೂಕು ಪಂಚಾಯತಿ ಕಾರ್ಯ ನಿರ್ವಾಹಕ ಅಧಿಕಾರಿಗಳ ಪತ್ರ

ಪ್ರಸ್ತಾವನೆ:

ಬೆಂಗಳೂರು ಉತ್ತರ ತಾಲ್ಲೂಕು ಪಂಚಾಯತಿಯ 2022-23ನೇ ಸಾಲಿನ ಅನುದಾದಲ್ಲಿ ಹೊಸದಾಗಿ ಸೃಜನೆಯಾದ ಯೆಲಹಂಕ ತಾಲ್ಲೂಕು ಪಂಚಾಯಿತಿಯ ವ್ಯಾಪ್ತಿಯ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲೆಯ ಶಿಕ್ಷಕರ ವೇತನ ಸೆಳೆಯಲಾಗಿದ್ದು , ಆದ್ದರಿಂದ ಮೇ,ಜೂನ್ ಮತ್ತು ಜುಲೈ ಮಾಹೆಯ ಶಿಕ್ಷಕರ ವೇತನ ವೆಚ್ಚಕ್ಕೆ ಬೆಂಗಳೂರು ಉತ್ತರ ತಾಲ್ಲೂಕು ಪಂಚಾಯಿತಿಯಲ್ಲಿ ಅನುದಾನ ಕೊರತೆ ಉಂಟಾಗಿರುವುದರಿಂದ ಶಿಕ್ಷಕರ ವೇತನ ವೆಚ್ಚಕ್ಕಾಗಿ ಲೆಕ್ಕ ಶೀರ್ಷಿಕೆ 2202-00-101-0-61-005ರಡಿ ರೂ.1627.86ಲಕ್ಷಗಳನ್ನು ಹಾಗೂ ಲೆಕ್ಕ ಶೀರ್ಷಿಕೆ 2202-00-101-0-64-005ರಡಿ ರೂ.590.06ಲಕ್ಷಗಳನ್ನು ಬಿಡುಗಡೆಗೊಳಿಸಲು ಪ್ರಸ್ತಾವಿಸಿದ್ದು, ಪ್ರಸ್ತಾವನೆಗಳನ್ನು ಪರಿಶೀಲಿಸಿ ಕೆಳಕಂಡಂತೆ ಆದೇಶಿಸಿದೆ.

## ಸರ್ಕಾರದ ಆದೇಶ ಸಂಖ್ಯೆ: ಆಇ 354 ವೆಚ್ಚ 6/2022(ಇ) ದಿನಾಂಕ:21ನೇ ಜೂನ್ 2022

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಬೆಂಗಳೂರು ಉತ್ತರ ತಾಲ್ಲೂಕು ಪಂಚಾಯತಿಗೆ 2022-23ನೇ ಸಾಲಿನಲ್ಲಿ ಒದಗಿಸಿರುವ ಅನುದಾನದಲ್ಲಿ ರೂ.4321.61ಲಕ್ಷಗಳನ್ನು ಬಿಡುಗಡೆಗೊಳಿಸಲಾಗಿದ್ದು, ಉಳಿದ ರೂ.6050.25ಲಕ್ಷಗಳ ಅನುದಾನದಲ್ಲಿ ಆರ್ಥಿಕ ಅಧಿಕಾರ ಪ್ರತ್ಯಾಯೋಜನೆಯ ಷರತ್ತನ್ನು ಸಡಿಲಿಸಿ ವೇತನ ವೆಚ್ಚಕ್ಕಾಗಿ ರೂ.2217.92ಲಕ್ಷ (ರೂಪಾಯಿ ಎರಡು ಸಾವಿರದ ಎರಡು ನೂರ ಹದಿನೇಳು ಲಕ್ಷದ ತೊಂಬತ್ತೆರಡು ಸಾವಿರಗಳು ಮಾತ್ರ) ಗಳನ್ನು ಬಿಡುಗಡೆಗೊಳಿಸಿದೆ.

(ರೂ. ಲಕ್ಷಗಳಲ್ಲಿ)

| ಕ್ರ.ಸಂ. | ಜಿಲ್ಲೆ | ತಾಲ್ಲೂಕು ಪಂಚಾಯತಿ | ಕಾರ್ಯಕ್ರಮದ ಲೆಕ್ಕ ಶೀರ್ಷಿಕೆ | 2202-01-197-1-01-401 ಬಿಡುಗಡೆಗೊಳಿಸಿದ ಲೆಕ್ಕ ಶೀರ್ಷಿಕೆ |
|---|---|---|---|---|
| 1 | ಬೆಂಗಳೂರು ನಗರ | ಬೆಂಗಳೂರು ಉತ್ತರ | 2202-00-101-0-61-005 | 1627.86 |
| | | | 2202-00-101-0-64-005 | 590.06 |
| | | | ಒಟ್ಟು | 2217.92 |

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ

(ಶ್ರೀಕೃಷ್ಣ ಎನ್. ಬಾಗ್ಯಾಗೋಳ)
ವಿಶೇಷಾಧಿಕಾರಿ(ಜ.ಪಂ.) ಹಾಗೂ ಪದನಿಮಿತ್ತ
ಸರ್ಕಾರದ ಜಂಟಿ ಕಾರ್ಯದರ್ಶಿ
ಆರ್ಥಿಕ ಇಲಾಖೆ

1.ಮಹಾಲೇಖಪಾಲರು(ಎ&ಇ) ಲೆಕ್ಕ ಪರಿಶೋಧನೆ 1 & 2, ಕರ್ನಾಟಕ, ಬೆಂಗಳೂರು